ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **813 (977)**
ಸದಸ್ಯರ ಹೆಸರು : ಶ್ರೀ. ಡಾ॥ ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 28.09.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ಸರ್ಕಾರಿ ಪ್ರೌಢಶಾಲೆಗಳಲ್ಲಿ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಮುಖ್ಯೋಪಾಧ್ಯಾಯರು ಮತ್ತು ಪ್ರಾಂಶುಪಾಲರ ಹುದ್ದೆಗಳು ಎಷ್ಟು (ಮಾಹಿತಿ ನೀಡುವುದು)	ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಮುಖ್ಯೋಪಾಧ್ಯಾಯರು ಹುದ್ದೆಗಳು = 1023 ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಪ್ರಾಚಾರ್ಯರ ಹುದ್ದೆಗಳ ಸಂಖ್ಯೆ:618
ಆ.	ಸರ್ಕಾರಿ ಪ್ರೌಢಶಾಲೆಗಳಲ್ಲಿ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಪ್ರತಿ ವರ್ಷ ಮುಖ್ಯೋಪಾಧ್ಯಾಯರು ಮತ್ತು ಪ್ರಾಂಶುಪಾಲರ ಹುದೆಗಳನ್ನು ತುಂಬಲು ಸರ್ಕಾರಕ್ಕೆ ಇರುವ ತೊಂದರೆ ಏನು; (ಮಾಹಿತಿ ನೀಡುವುದು)	ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಮುಖ್ಯೋಪಾಧ್ಯಾಯರ ಹುದ್ದೆಗಳನ್ನು ನಿವೃತ್ತಿ, ನಿಧನ ಬಡ್ತಿ ಇನ್ನಿತರೆ ಕಾರಣಗಳಿಂದಾಗಿ ಉದ್ಭವಿಸುವ ಖಾಲಿ ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ. ಬೆಂಗಳೂರು ವಿಭಾಗದ ಒಟ್ಟು 236 ಸರ್ಕಾರಿ ಪ್ರೌಢಶಾಲೆಗಳ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರ ಹುದ್ದೆಗಳಿಗೆ ಬಡ್ತಿ ನೀಡಿಸ್ಥಳ ನಿಯುಕ್ತಿಗೊಳಿಸಿದೆ. ಮೈಸೂರು ವಿಭಾಗದ ಒಟ್ಟು424 ಸರ್ಕಾರಿ ಪ್ರೌಢಶಾಲೆಗಳ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರ ಹುದ್ದೆಗಳಿಗೆ ಬಡ್ತಿ ನೀಡಲು ಕ್ರಮವಹಿಸಲಾಗಿದೆ. **ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ** ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಯೋ ನಿವೃತ್ತಿ/ನಿಧನ/ ರಾಜಿನಾಮೆ ಇನ್ನೀತರೆ ಕಾರಣಗಳಿಂದ ದಿನಾಂಕ:31/08/2020ಕ್ಕೆ ಒಟ್ಟು 618 ಪ್ರಾಚಾರ್ಯರ ಹುದ್ದೆಗಳು ಖಾಲಿಯಿದ್ದು, ಖಾಲಿಯಿರುವ 618 ಪ್ರಾಚಾರ್ಯರ ಹುದ್ದೆಗಳ ಪೈಕಿ 305 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಕರ್ನಾಟಕ ಪರೀಕ್ಷಾ ಮಂಡಳಿಗೆ ವಹಿಸಲಾಗಿದೆ.
ಇ.	ಬಹಳಷ್ಟು ದೀರ್ಘಕಾಲ ಈ ಹುದ್ದೆಗಳು ಖಾಲಿ ಇದ್ದಲ್ಲಿ, ಶೈಕ್ಷಣಿಕ ಪ್ರಗತಿ ಕುಂಠಿತವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಬಂದಿದೆ. ಕಾಲಕಾಲಕ್ಕೆ ಅರ್ಹ ಪ್ರೌಢ ಶಾಲಾ ಶಿಕ್ಷಕರನ್ನು ನಿಯಮಾನುಸಾರ ಬಡ್ತಿ ನೇಮಕಾತಿ ಮೂಲಕ ತುಂಬಲಾಗುತ್ತಿದ್ದು ಹಾಗೂ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ಮೂಲಕ ಶೈಕ್ಷಣಿಕ ಪ್ರಗತಿಗೆ ಕುಂಠಿತವಾಗದಂತೆ ನೋಡಿಕೊಳ್ಳಲಾಗುತ್ತಿದೆ.

		ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಯೋ ನಿವೃತ್ತಿ/ನಿಧನ/ ರಾಜಿನಾಮೆ ಇನ್ನಿತರೆ ಕಾರಣಗಳಿಂದ ಖಾಲಿಯಾಗುವ, ಪ್ರಾಚಾರ್ಯರ ಹುದ್ದೆಗಳಿಗೆ ಬಡ್ತಿ ಮೂಲಕ ಹಾಗೂ ಆಯಾ ಕಾಲೇಜಿನ ಹಿರಿಯ ಉಪನ್ಯಾಸಕರನ್ನು ಪ್ರಾಚಾರ್ಯರ ಹುದ್ದೆಗೆ ಪ್ರಭಾರದಲ್ಲಿರಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಕುಂಠಿತವಾಗದಂತೆ ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಇಪಿ 148 ಎಸ್‌ಓಹೆಚ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು